<u>ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯದಂಡಾಧಿಕಾರಿಯವರ ನ್ಯಾಯಾಲಯ, ಪೊನ್ನಂಪೇಟೆ.</u>

## <u>ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 665/2019</u> .

ಫ್ರಾ.ಸಾ.ಃ4
ಚಾ.ಸಾ.ಃ3

| | |
|---|---|
| ಹೆಸರು | ಃ ಸುಜಿತ್ |
| ತಂದೆಯ ಹೆಸರು | ಃ ಲೇಟ್ ಗೋಪಾಲ |
| ವಯಸ್ಸು | ಃ 33 ವರ್ಷ |
| ಉದ್ಯೋಗ | ಃ ಪೈಂಟಿಂಗ್ |
| ವಿಳಾಸ | ಃ ಪೊನ್ನಂಪೇಟೆ. |

... ................................................................................................... ...

ದಿನಾಂಕ 5 ನೇ ಡಿಸೆಂಬರ್ 2022 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆಃ- ಮಾನ್ಯ ಸ ಸ ಅ ರವರಿಂದ</u> ಃ -

ಆರೋಪಿ ನನಗೆ ಪರಿಚಯವಿಲ್ಲ. ಸಾಕ್ಷಿ ತನ್ನ ಸಹಿಯನ್ನು ಗುರುತಿಸಿದ ಮೇರೆಗೆ ನಿಪಿ 2 ಸಿ ಮತ್ತು 3 ಸಿ ಎಂದು ಗುರುತಿಸಲಾಯಿತು. ನಿಪಿ 2 ಮತ್ತು 3 ಕ್ಕೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ 4 ರಿಂದ 7 ರಲ್ಲಿ ನಾನು ಇದ್ದೇನೆ ಆದರೆ ಎಲ್ಲಿ ಫೋಟೋ ತೆಗೆಯಲಾಯಿತು ಎಂದು ನೆನಪಿಲ್ಲ. ವಾಹನ ಅಮಾನತ್ ಮಹಜರ್ ನಲ್ಲಿ ಸಾಕ್ಷಿ ತನ್ನ ಸಹಿಯನ್ನು ಗುರುತಿಸಿದ ಮೇರೆಗೆ ನಿಪಿ 8 ಸಿ ಎಂದು ಗುರುತಿಸಲಾಯಿತು. ನಿಪಿ 9 ರಿಂದ 16 ರಲ್ಲಿ ನಾನು ಇದ್ದೇನೆ ಆದರೆ ಎಲ್ಲಿ ಫೋಟೋ ತೆಗೆಯಲಾಯಿತು ಎಂದು ನೆನಪಿಲ್ಲ. ನನ್ನ ಸಮಕ್ಷಮ ಮಹಜರ್ ಮಾಡಲಿಲ್ಲ, ನಾನು ಅಪಘಾತ ಸ್ಥಳಕ್ಕೆ ಹೋಗಲಿಲ್ಲ, ವಾಹನವನ್ನು ಅಮಾನತ್ತುಪಡಿಸಿಕೊಂಡಿಲ್ಲ. ನಾನು ಪೊಲೀಸರಿಗೆ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನು ಪರಿಶೀಲಿಸಿ ಹಾಗೂ ಸ.ಸ.ಅ.ರವರ ವಾದವನ್ನು ಆಲಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

<u>ಪಾಟೀ ಸವಾಲು :- ಮಾನ್ಯ ಸ ಸ ಅ ರವರಿಂದ</u> :-

ದಿನಾಂಕ 29.01.2019 ರಂದು ನಾನು ಅರ್ವತೋಕ್ಲು ಗ್ರಾಮದ ಕಾಫಿ ಬೋರ್ಡ್ ಬಳಿ ನಿಂತಿದ್ದಾಗ ಪೊಲೀಸರು ಅಪಘಾತ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಹೆದ್ದಾರಿಯಲ್ಲಿ ಮಹಜರ್ ಮಾಡಿದರು ಎಂದರೆ ಸರಿಯಲ್ಲ. ಪಿರ್ಯಾದಿಯವರು ಸ್ಥಳ ತೋರಿಸಿದರು ಎಂದರೆ ಸರಿಯಲ್ಲ. ಸದರಿ ಮಹಜರ್ ಅನ್ನು ಬೆಳಗ್ಗೆ 11.30 ರಿಂದ 12.30 ರವರೆಗೆ ಮಾಡಿದರು ಎಂದರೆ ಸರಿಯಲ್ಲ. ತನಿಖಾಧಿಕಾರಿ ಸ್ಥಳದಲ್ಲಿ ನಿಪಿ 3 ರಂತೆ ನಕ್ಷೆ ತಯಾರಿಸಿದರು ಎಂದರೆ ಸರಿಯಲ್ಲ. ನಿಪಿ 4 ರಿಂದ 7 ರಂತೆ ಪೋಟೋ ತೆಗೆದರು ಎಂದರೆ ಸರಿಯಲ್ಲ.

ದಿನಾಂಕ 29.01.2019 ರಂದು ಮಧ್ಯಾಹ್ನ 1 ಗಂಟೆಯಿಂದ 2 ಗಂಟೆಯ ಸಮಯದಲ್ಲಿ ಮೇಲೆ ಹೇಳಿದ ಸ್ಥಳದಲ್ಲಿ ಪೊಲೀಸರು ಭಾವಚಿತ್ರ ತೆಗೆದು ನನ್ನ ಸಮಕ್ಷಮ ಮಹಜರ್ ಮಾಡಿದರು ಎಂದರೆ ಸರಿಯಲ್ಲ. ಹೊಂಡಾ ಆಕ್ಟಿವ್ ವಾಹನದ ನಂಬರ್ ಕೆ ಎ 12 ಆರ್ 9533 ಅಮಾನತ್ತುಪಡಿಸಿದರು ಎಂದರೆ ಸರಿಯಲ್ಲ. ಸದರಿ ವಾಹನಕ್ಕೆ ಮುಂಭಾಗ , ಮಡ್ ಗಾರ್ಡ್ ಜಖಂ ಆಗಿತ್ತು ಎಂದರೆ ನನಗೆ ಗೊತ್ತಿಲ್ಲ. ನಾನು ಹಾಜರಿದ್ದು ನಿಪಿ 2, 3 ಮತ್ತು 8 ಕ್ಕೆ ಸ್ಥಳದಲ್ಲಿ ಸಹಿ ಮಾಡಿದರೂ ಈಗ ಆರೋಪಿಗೆ ಸಹಾಯವಾಗಲೆಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ 8 ರಂತೆ ಮಹಜರ್ ಮಾಡುವಾಗ ನಿಪಿ 9 ರಿಂದ 16 ಭಾವ ಚಿತ್ರ ಗಳನ್ನು ತೆಗೆದರು ಎಂದರೆ ಸರಿಯಲ್ಲ. ನಂತರ ಈಗ ಓದಿ ಹೇಳಿದಂತೆ ತನಿಖಾ ಕಾಲದಲ್ಲಿ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯ ಭಾಗವನ್ನು ನಿ ಪಿ 19 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

<u>ಮರು ವಿಚಾರಣೆ</u> :- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಖ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಗಿರುತ್ತದೆ)
ಓದಿ ಹೇಳಿ ಕೇಳಿಸಿ ಸರಿ ಇದೆ ಎಂದು ಒಪ್ಪಿದೆ.

(ಸಾಕ್ಷಿಯವರ ಸಹಿ) ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ.,ಪೊನ್ನಂಪೇಟೆ.